ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ:ಆಯವ್ಯಯ:ಅಉಸ:04:2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:16.03.2022.

**ಸುತ್ತೋಲೆ**

ವಿಷಯ: 2021-22ನೇ ಸಾಲಿನಲ್ಲಿ ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ಪಾವತಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸಮಸಂಖ್ಯೆಯ ವಿವಿಧ ದಿನಾಂಕಗಳ ಅನುದಾನ ಬಿಡುಗಡೆ ಆದೇಶಗಳು

* * * *

2021-22ನೇ ಸಾಲಿನಲ್ಲಿ ಅಧೀನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ಪಾವತಿಸಲು ಆಯವ್ಯಯ ಲೆಕ್ಕಶೀರ್ಷಿಕೆ 2202-03-103-2-01-324 ರಡಿಯಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಖಜಾನೆ-2ರಲ್ಲಿ ಪರಿಶೀಲಿಸಲಾಗಿ, ಹಲವಾರು ಬಟವಾಡೆ ಅಧಿಕಾರಿಗಳು ಗೌರವಧನವನ್ನು ಪಾವತಿಸದೇ ಅನುದಾನವನ್ನು ಉಳಿಸಿಕೊಂಡಿರುವುದು ಕಂಡು ಬಂದಿರುತ್ತದೆ ಹಾಗೂ ಹಲವು ಕಾಲೇಜುಗಳ ಪ್ರಾಂಶುಪಾಲರುಗಳು ಅತಿಥಿ ಉಪನ್ಯಾಸಕರುಗಳಿಗೆ ಗೌರವಧನ ಪಾವತಿಸಲು ಹೆಚ್ಚುವರಿ ಬೇಡಿಕೆ ಸಲ್ಲಿಸುತ್ತಿರುವುದನ್ನು ಗಮನಿಸಲಾಗಿದೆ. ಪ್ರಯುಕ್ತ ಅಧೀನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು ಈ ಕೆಳಕಂಡ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಅತಿಥಿ ಉಪನ್ಯಾಸಕರಿಗೆ ಗೌರವಧನ ಪಾವತಿಸಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

- ಕಾಲೇಜಿನ ಹಂತದಲ್ಲಿ ಅನುದಾನ ಲಭ್ಯವಿದ್ದಲ್ಲಿ ಸೆಪ್ಟೆಂಬರ್-2021ರ ಮಾಹೆಯಲ್ಲಿ ಸಂಬಂಧಿಸಿದ ವಿಶ್ವವಿದ್ಯಾಲಯಗಳ ಶೈಕ್ಷಣಿಕ ವೇಳಾಪಟ್ಟಿಯನ್ವಯ ಅತಿಥಿ ಉಪನ್ಯಾಸಕರು ಕಾರ್ಯ ನಿರ್ವಹಿಸಿದ್ದಲ್ಲಿ ಮಾತ್ರ ಸದರಿ ಅವಧಿಗೆ ಗೌರವಧನವನ್ನು ಪಾವತಿಸುವುದು.
- ದಿನಾಂಕ:10.12.2021ರಿಂದ ಅತಿಥಿ ಉಪನ್ಯಾಸಕರು ಮುಷ್ಕರವನ್ನು ನಡೆಸಿದ್ದು, ಸದರಿ ಅವಧಿಯಲ್ಲಿ ಕಾಲೇಜುಗಳಲ್ಲಿ ಯಾರಾದರೂ ಅತಿಥಿ ಉಪನ್ಯಾಸಕರು ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸಿದ್ದಲ್ಲಿ ಮಾತ್ರ ಅಂತಹ ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ಪಾವತಿಸುವುದು.
- ಮೇಲ್ಕಂಡಂತೆ ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ಪಾವತಿಸಿದ ನಂತರ ಕಾಲೇಜಿನ ಹಂತದಲ್ಲಿ ಅನುದಾನ ಲಭ್ಯವಿದ್ದಲ್ಲಿ ಮಾರ್ಚ್-2022ರ ಮಾಹೆಯ 15ನೇ(ಹದಿನೈದು) ದಿನಾಂಕದವರೆಗೂ ಲೆಕ್ಕಾಚಾರ ಮಾಡಿ ಅತಿಥಿ ಉಪನ್ಯಾಸಕರಿಗೆ ಗೌರವಧನ ಪಾವತಿಸಲು ಕ್ರಮವಹಿಸುವುದು.

**(ಮಾನ್ಯ ಆಯುಕ್ತರ ಆದೇಶದ ಮೇರೆಗೆ)**

R. Mugeshal

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ:

ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

**ಪ್ರತಿಯನ್ನು:**

1. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಸದರಿ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಕ್ತ ಕ್ರಮಕ್ಕಾಗಿ.
2. ಕಛೇರಿ ಪ್ರತಿ.

Scanned with CamScanner